ಕರ್ನಾಟಕ ಸರ್ಕಾರ
ಉಪನಿರ್ದೇಶಕರಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಭಾರತೀಯರೆಡ್‌ಕ್ರಾಸ್ ಸಂಸ್ಥೆ ಕಟ್ಟಡ, ಚರ್ಚ್ ಸರ್ಕಲ್ ಹತ್ತಿರ,
ಅಶೋಕ ರಸ್ತೆ,ತುಮಕೂರು ಜಿಲ್ಲೆ-572101

ಇ-ಮೇಲ್ ವಿಳಾಸ:dd.tumkurwcd@ymail.com ದೂರವಾಣಿ ಸಂಖ್ಯೆ:0816-2272590

ಸಂಖ್ಯೆ:ಉನಿತು:ಮಮಅಇ:ಅಂ.ಕಾ.ಸ.:ಆನ್‌ಲೈನ್:ನೇ:2018-19 ದಿನಾಂಕ:21-08-2018

## :: ಅಧಿಸೂಚನೆ ::

ಸರ್ಕಾರದಆದೇಶ ಸಂಖ್ಯೆ:ಮಮಇ:303:ಐಸಿಡಿ:2017 ದಿನಾಂಕ:23-09-2017ರ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿಯ ಪರಿಷ್ಕೃತ ಮಾರ್ಗಸೂಚಿಯಂತೆ ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರ ಅನುಮೋದನೆಯಂತೆ ತುಮಕೂರು ಜಿಲ್ಲೆಯ 11 ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿ **18**-ಅಂಗನವಾಡಿಕಾರ್ಯಕರ್ತೆ, **01**-ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ **63**-ಅಂಗನವಾಡಿ ಸಹಾಯಕಿ ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ (**ವೆಬ್‌ಸೈಟ್ ವಿಳಾಸ**:www.anganwadirecruit.kar.nic.in) ಮೂಲಕ ಈ ಕೆಳಗಿನ ಮಾರ್ಗಸೂಚಿ/ ನಿಬಂಧನೆಗಳಲ್ಲಿ ತಿಳಿಸಿರುವಂತೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 28-09-2018 ರೊಳಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ.

**ಸೂಚನೆಗಳು:-**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಆನ್‌ಲೈನ್(Online)ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಈ ಕೆಳಗಿನ ನೇಮಕಾತಿಯ ಮಾರ್ಗಸೂಚಿ/ ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ ಅವಶ್ಯಕ ದೃಢಿಕೃತ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸುವುದು.
3. ಆನ್‌ಲೈನ್(Online) ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು. ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ದಿನಾಂಕ:28-09-2018ಕ್ಕೆ 18 ವರ್ಷ ಪೂರ್ಣಗೊಂಡಿರಬೇಕು ಹಾಗೂ 35 ವರ್ಷ ಮೀರಿರಬಾರದು.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ತುಮಕೂರು

## ಆನ್‌ಲೈನ್‌ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ಜನ್ಮ ದಿನಾಂಕ ಇರುವ ಶಾಲಾ ಪ್ರಮಾಣ ಪತ್ರ.
3. ನಿಗದಿತ ವಿದ್ಯಾರ್ಹತೆಯಅಂಕಪಟ್ಟಿ.
4. ಅಭ್ಯರ್ಥಿಯು ಅದೇ ಗ್ರಾಮದಲ್ಲಿ (ನಗರ ಪ್ರದೇಶವಾಗಿದ್ದಲ್ಲಿ ಅದೇ ವಾರ್ಡ್‌ನಲ್ಲಿ) ವಾಸ್ತವ್ಯವಿರುವ ಬಗ್ಗೆ ತಹಶೀಲ್ದಾರರು/ಉಪ ತಹಶೀಲ್ದಾರರಿಂದ ಪಡೆದ ಒಂದು (1) ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
5. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ)
6. ವಿಧವೆಯಾಗಿದ್ದಲ್ಲಿ ಪತಿಯ ಮರಣ ಪ್ರಮಾಣ ಪತ್ರ.(ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
7. ಅಭ್ಯರ್ಥಿಯು ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಯಾಗಿದ್ದಲ್ಲಿ ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
8. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರು ಅಂಗವಿಕಲರಾಗಿದ್ದಲ್ಲಿ, ಅಂಗವಿಕಲತೆ ಪ್ರಮಾಣ ಪತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
9. ಅಭ್ಯರ್ಥಿಯು ವಿಚ್ಛೇದಿತರಾಗಿದ್ದಲ್ಲಿ, ವಿಚ್ಛೇದನಾ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
10. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಅರ್ಜಿ ಸಲ್ಲಿಸಿದಲ್ಲಿ ಈ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
11. ಅಭ್ಯರ್ಥಿಯು ಪರಿತ್ಯಕ್ತೆಯಾಗಿದ್ದಲ್ಲಿ, ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
12. ಅಭ್ಯರ್ಥಿಯ ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿಯಾಗಿದ್ದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13. ಅಭ್ಯಥಿಯು ಯೋಜನಾ ನಿರಾಶ್ರಿತರಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

21/8

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ತುಮಕೂರು

## CALENDER FOR EVENTS

ಅಂಗನವಾಡಿಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.

| website ವಿಳಾಸ: www.anganwadirecruitment.nic.in | | |
|---|---|---|
| ತಾತ್ಕಾಲಿಕ ವೇಳಾಪಟ್ಟಿ | | |
| ವಿವರಣೆ | ದಿನಗಳು | ದಿನಾಂಕ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | – | 30–08–2018 ಬೆಳಿಗ್ಗೆ 10:00 ಗಂಟೆಯಿಂದ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30 ದಿನಗಳು | 28–09–2018 ಸಂಜೆ 05:30 ಗಂಟೆಯವರೆಗೆ |
| ಆಯ್ಕೆ ಸಮಿತಿ ಸದಸ್ಯರು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಎನ್.ಐ.ಸಿ.ಯಲ್ಲಿ ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆ | 7 ದಿನಗಳು | 29–09–2018 ರಿಂದ 06–10–2018 ರವರೆಗೆ |
| ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು. | 1 ದಿನ | 09–10–2018 |
| ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ಹಾಗೂ ಸಾರ್ವಜನಿಕ ಆಕ್ಷೇಪಣೆ ಸಲ್ಲಿಸುವಿಕೆ ಅವಕಾಶ | 7 ದಿನಗಳು | 10–10–2018 ರಿಂದ 16–10–2018 |
| ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ | 1 ದಿನ | 17–10–2018 |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು | 1 ದಿನ | 22–10–2018 |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ತುಮಕೂರು